ತುಂಗಾ ಮೇಲ್ದಂಡೆ ನೀರಾವರಿ ಯೋಜನೆ

೧೩೦೬. ಶ್ರೀ ಮಂಜುನಾಥ ಸಿ. ಕುನ್ನೂರ್ (ಶಿಗ್ಗಾಂವ್).—ಮಾನ್ಯ ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ತುಂಗಾ ಮೇಲ್ದಂಡೆ ನೀರಾವರಿ ಯೋಜನೆಯ ಸಂಬಂಧದಲ್ಲಿ (ಮಾಲತಿ ಜಲಾನಯನ ಹೊರತು ಪಡಿಸಿ) ಯೋಜನಾ ವರದಿ ತಯಾರು ಆಗಿದೆಯೇ ?

ಆ) ಹಾಗಿದ್ದಲ್ಲಿ ಸರ್ಕಾರದವರು ಮಾಲತಿ ಜಲಾನಯನ ಕೈಬಿಟ್ಟು ತುಂಗಾ ಮೇಲ್ದಂಡೆ ಯೋಜನೆಯನ್ನು ಕೈಗೆತ್ತಿಕೊಳ್ಳುವರೇ ?

ಇ) ಮಾಲತಿ ಜಲಾನಯನ ಅಣೆಕಟ್ಟು ಕಟ್ಟೆಯೇ ತುಂಗಾ ಮೇಲ್ದಂಡೆ ಯೋಜನೆ ಜಾರಿಗೆ ತರಲು ಸರ್ಕಾರಕ್ಕೆ ಇರುವ ಅಡ್ಡಿಆತಂಕಗಳು ಯಾವುವು ?

ಈ) ತುಂಗಾ ಮೇಲ್ದಂಡೆ ಯೋಜನೆಯಿಂದ ಧಾರವಾಡ ಜಿಲ್ಲಾ ಸವಣೂರು ಶಿಗ್ಗಾಂವ ಶಿರಹಟ್ಟಿ ಮುಂಡರಗಿ ಕೊಪ್ಪಳ ಭಾಗದ ರೈತ ಭಾಂದವರಿಗೆ ತೊಂದರೆಯಾಗುವುದು ನಿಜವೇ ?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಲೋಕೋಪಯೋಗಿ ಮತ್ತು ನೀರಾವರಿ ಸಚಿವರು).—

ಅ) ಆಗಿದೆ.

ಆ) ಈ ಬಗ್ಗೆ ಇನ್ನೂ ಯಾವ ನಿರ್ಧಾರವನ್ನೂ ತೆಗೆದುಕೊಂಡಿಲ್ಲ.

ಇ) ಮಾಲತಿ ಜಲಾಶಯದಿಂದ ಅತೀ ಹೆಚ್ಚಿನ ಮಂಳುಗಡೆ ಸಂಭವಿರುವುದರಿಂದ ಈ ಯೋಜನೆಗೆ ಅಲ್ಲಿಯ ಜನರ ವಿರೋಧವಿದೆ.

ಈ) ಇಲ್ಲ.

ಶಿಗ್ಗಾಂವ್ ಮತ್ತು ಸವಣೂರು ಗ್ರಾಮೀಣ ಪ್ರದೇಶಗಳಲ್ಲಿ ಸಾರಿಗೆ ವ್ಯವಸ್ಥೆ

೧೧೫೦. ಶ್ರೀ ಮಂಜುನಾಥ ಸಿ. ಕುನ್ನೂರು (ಶಿಗ್ಗಾಂವ).—ಮಾನ್ಯ ಸಾರಿಗೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಶಿಗ್ಗಾಂವ್ ಮತ್ತು ಸವಣೂರು ತಾಲ್ಲೂಕುಗಳಲ್ಲಿ ಗ್ರಾಮೀಣ ಪ್ರದೇಶದಲ್ಲಿ ಇನ್ನೂ ಅನೇಕ ಹಳ್ಳಿಗಳಿಗೆ ಬಸ್ಸಿನ ಸೌಕರ್ಯವಿಲ್ಲದಿರುವುದು ಸರ್ಕಾರದವರ ಗಮನಕ್ಕೆ ಬಂದಿರುವುದೇ ?

ಆ) ಹಾಗಿದ್ದಲ್ಲಿ, ಸರ್ಕಾರದವರು ಕೈಗೊಂಡಿರುವ ಕ್ರಮಗಳೇವು ?

ಶ್ರೀ ಕೆ. ಜೆ. ಜಾರ್ಜ್ (ಸಾರಿಗೆ ರಾಜ್ಯ ಸಚಿವರು).—

ಅ) ಬಂದಿದೆ.

ಆ) ಹಳ್ಳಿಗಳಿಗೆ ಕ್ರಮಿಸಲು ಸಂಚಾರ ಯೋಗ್ಯವಾದ ರಸ್ತೆಗಳ ನಿರ್ಮಾಣದ ನಂತರ ಈ ಹಳ್ಳಿಗಳಿಗೆ ಸಂಚಾರ ಸೌಲಭ್ಯಗಳನ್ನು ವಿಸ್ತರಿಸಲಾಗುವುದು.

ಶಿಗ್ಗಾಂವ ನಗರದಲ್ಲಿ ಮುನ್ಸಿಫ್ ನ್ಯಾಯಾಲಯ ತೆರೆಯುವ ಬಗ್ಗೆ

೧೧೪೫. ಶ್ರೀ ಮಂಜುನಾಥ ಸಿ. ಕುನ್ನೂರ (ಶಿಗ್ಗಾಂವ) —ಮಾನ್ಯ ಯೋಜನಾ, ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಶಿಗ್ಗಾಂವ ನಗರದಲ್ಲಿ ಹೊಸದಾಗಿ ಮುನ್ಸಿಫ್, ಜೆ. ಎಂ. ಎಫ್. ಸಿ. ನ್ಯಾಯಾಲಯ ತೆರೆಯಬೇಕೆಂಬ ವಿಚಾರ ಸರ್ಕಾರದಲ್ಲಿದೆಯೇ ?

ಆ) ಹಾಗಿದ್ದಲ್ಲಿ, ಇನ್ನೆಷ್ಟು ದಿವಸಗಳಲ್ಲಿ ಸದರೀ ನ್ಯಾಯಾಲಯಗಳನ್ನು ತೆರೆಯಲಾಗುವುದು ?

ಶ್ರೀ ಎಂ. ವೀರಪ್ಪ ಮೊಯ್ಲಿ (ಯೋಜನಾ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಹಾಗೂ ಪ್ರವಾಸೋದ್ಯಮ ಮಂತ್ರಿಗಳು).—

ಅ) ಈ ವಿಷಯವು ಉಚ್ಚ ನ್ಯಾಯಾಲಯದ ಪರಿಶೀಲನೆಯಲ್ಲಿದೆ.

ಆ) ಸರ್ಕಾರವು ಉಚ್ಚ ನ್ಯಾಯಾಲಯದಿಂದ ಪ್ರಸ್ತಾವನೆ ಸ್ವೀಕರಿಸಿದ ನಂತರ ದೊರೆಯುವ ಸಂಪನ್ಮೂಲಗಳನ್ನು ಅವಲಂಬಿಸಿ ಪರಿಶೀಲಿಸಲಾಗುವುದು.